ಲಿಖಿತ ಮೂಲಕ ಉತ್ತರಿಸುವ ಪ್ರಶ್ನೆ

ಕರ್ನಾಟಕ ವಿಧಾನ ಪರಿಷತ್ತು

ನೂರ ನಲವತ್ತೆರಡನೆಯ ಅಧಿವೇಶನ

ಗುರುವಾರ, ದಿನಾಂಕ : 10 ನೇ ಡಿಸೆಂಬರ್, 2020

ಬೆಂಗಳೂರಿನ ಹೊಸಗುಡ್ಡದಳ್ಳಿಯಲ್ಲಿರುವ ಕೆಮಿಕಲ್ ಕಾರ್ಖಾನೆಯ ಬೆಂಕಿ ಅವಘಡದ ಬಗ್ಗೆ

ಶ್ರೀ ಎಂ. ನಾರಾಯಣಸ್ವಾಮಿ(ಸ್ಥಳೀಯ ಸಂಸ್ಥೆಗಳ ಕ್ಷೇತ್ರ) -

332 (426) ಮಾನ್ಯ ಮುಖ್ಯಮಂತ್ರಿಗಳು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ -

(ಅ) ಇತ್ತೀಚೆಗೆ ಬೆಂಗಳೂರು ಹೊಸಗುಡ್ಡದಳ್ಳಿಯಲ್ಲಿರುವ ಕೆಮಿಕಲ್ ಕಾರ್ಖಾನೆಯಲ್ಲಿ ಬೆಂಕಿ ಅವಘಡವಾಗಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ;

(ಆ) ವಸತಿ ಪ್ರದೇಶಗಳಲ್ಲಿ ಈ ರೀತಿಯ ಕಾರ್ಖಾನೆಗಳನ್ನು ಸ್ಥಾಪನೆ ಮಾಡಲು ಇರುವ ಮಾನದಂಡಗಳೇನು;

(ಇ) ವಸತಿ ಪ್ರದೇಶದಲ್ಲಿ ಈ ರೀತಿಯ ಅಪಾಯಕಾರಿ ಕೆಮಿಕಲ್ ಕಾರ್ಖಾನೆಗಳನ್ನು ನಡೆಸುತ್ತಿರುವವರ ಬಗ್ಗೆ ಹಾಗೂ ಸಂಬಂಧಪಟ್ಟ ಅಧಿಕಾರಿ ವಿರುದ್ಧ ಸರ್ಕಾರ ಕೈಗೊಂಡಿರುವ ಕ್ರಮಗಳೇನು;

(ಈ) ಸದರಿ ಬೆಂಕಿ ಅವಘಡದಲ್ಲಿ ಕಾರ್ಖಾನೆಯ ಅಕ್ಕಪಕ್ಕ ಇರುವ ಸಾರ್ವಜನಿಕ ಸ್ವತ್ತುಗಳಿಗೆ ಆಗಿರುವ ನಷ್ಟಕ್ಕೆ ಸರ್ಕಾರ ಒದಗಿಸಿದ ಪರಿಹಾರವೆಷ್ಟು;

(ಉ) ಇತ್ತೀಚೆಗೆ ಬೆಂಗಳೂರು ಹೊಸಗುಡ್ಡದಳ್ಳಿಯಲ್ಲಿರುವ ಕೆಮಿಕಲ್ ಕಾರ್ಖಾನೆಯಲ್ಲಿ ಆಗಿರುವ ಬೆಂಕಿ ಅವಘಡದ ಬಗ್ಗೆ ಪೂರ್ಣ ಮಾಹಿತಿ ಒದಗಿಸುವುದು?